All India Radio: Bangalore
Regional Bulletin In Kannada
12.10.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು :

- ರಾಜ್ಯದಲ್ಲೂ ಕೆಮ್ಮು ನಿರೋಧಕ ಔಷಧ ಕೋಲ್ಡ್ ರಿಫ್ ನಿಷೇಧ ಸಚಿವ ದಿನೇಶ್ ಗುಂಡೂರಾವ್
- ಆರ್.ಎಸ್.ಎಸ್. ಚಟುವಟಿಕೆ ನಿಷೇಧ ವಿಚಾರ; ಬಿಜೆಪಿ ನಾಯಕರಿಂದ ಆಕ್ಷೇಪ
- ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಿದೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
- ಹಾಸನಾಂಬೆ ದರ್ಶನಕ್ಕೆ ಹರಿದು ಬಂದ ಭಕ್ತರ ದಂಡು; ಇದೇ ೧೯ ರಿಂದ ಚಿಕ್ಕಮಗಳೂರಿನ ದೇವಿರಮ್ಮ ದೀಪೋತ್ಸವ

<><><>

ದೇಶಾದ್ಯಂತ ಮಕ್ಕಳ ಸಾವಿಗೆ ಕಾರಣವಾಗಿದೆ ಎನ್ನಲಾದ ಕೆಮ್ಮು ನಿರೋಧಕ ಔಷಧ ಕೋಲ್ಡ್ ರಿಫ್ ಅನ್ನು ರಾಜ್ಯದಲ್ಲೂ ನಿಷೇಧಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಈಗಾಗಲೇ ರಾಜ್ಯದಲ್ಲಿ ಉತ್ಪಾದನೆಗೊಂಡು ಮಾರಾಟವಾಗುತ್ತಿರುವ ಕೆಮ್ಮಿನ ಔಷಧಿಗಳ ೩೯೦ ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದೆ. ಯಾವುದೇ ವರದಿಯಲ್ಲೂ ಋಣಾತ್ಮಕ ಅಂಶಗಳು ಪತ್ತೆಯಾಗಿಲ್ಲ . ಆದರೂ ಸಹ ಔಷಧ ಉತ್ಪಾದಕರಿಗೆ ನಿಗದಿಪಡಿಸಲಾಗಿರುವ ಮಾನದಂಡಗಳನ್ನು ಪುನರ್ ಪರಿಶೀಲಿಸಲು ಸರ್ಕಾರ ನಿರ್ಧರಿಸಿದೆ. ಔಷಧ ಉತ್ಪಾದನಾ ಸಂದರ್ಭದಲ್ಲಿ ಅತಿ ಎಚ್ಚರಿಕೆ ಅಗತ್ಯವಾಗಿದ್ದು, ನಿಯಮಾವಳಿಗಳ ಪ್ರಕಾರವೇ ಔಷಧಗಳನ್ನು ತಯಾರಿಸಬೇಕಾಗುತ್ತದೆ. ಹಾಗಾಗಿಯೇ ಔಷಧ ನಿಯಂತ್ರಕರ ಮೂಲಕವೇ ತಪಾಸಣೆ ತೀವ್ರಗೊಳಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಸರ್ಕಾರಿ ಜಾಗದಲ್ಲಿ ಆರ್‌ಎಸ್‌ಎಸ್ ಚಟುವಟಿಕೆ ನಿಷೇಧಿಸುವಂತೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಮುಜರಾಯಿ

ಇಲಾಖೆ ದೇವಾಲಯಗಳು ಪುರಾತತ್ವ ಇಲಾಖೆಯ ಸ್ಥಳಗಳು ಸೇರಿದಂತೆ ಯಾವುದೇ ಸರ್ಕಾರಿ ಸ್ಥಳಗಳಲ್ಲಿ ಆರ್‌ಎಸ್ ಎಸ್ ಸಂಘಟನೆಯ ಶಾಖೆ, ಬೈಠಕ್ ಹೆಸರಲ್ಲಿ ನಡೆಸುವ ಎಲ್ಲಾ ಬಗೆಯ ಚಟುವಟಿಕೆಗಳಿಗೆ ನಿಷೇಧ ಹೇರಬೇಕು ಎಂದು ಕೋರಿದ್ದಾರೆ. ಪತ್ರವನ್ನು ಪರಿಗಣಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಪ್ರಸ್ತಾವನೆ ಸಲ್ಲಿಸಿದ್ದಾರೆ.

<><><><>

ಆರ್.ಎಸ್.ಎಸ್. ಚಟುವಟಿಕೆ ನಿಷೇಧಿಸುವಂತೆ ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವುದನ್ನು ಬಿಜೆಪಿ ಖಂಡಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಕೇಂದ್ರ ಸಚಿವ ಶೋಭಾ ಕರಂದ್ಲಾಜೆ ಆರ್.ಎಸ್.ಎಸ್. ಭಾರತಕ್ಕೆ ಸೇವೆ ಸಲ್ಲಿಸಲು ಅನುಮತಿ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ರಾಜ್ಯದ ಅಭಿವೃದ್ಧಿಯಲ್ಲಿ ಸಂಪೂರ್ಣ ಎಡವಿ ಬಿದ್ದಿರುವ ರಾಜ್ಯ ಸರ್ಕಾರ ಮುಖ್ಯಮಂತ್ರಿ ಗಾದಿಯ ವಿಷಯದಲ್ಲಿ ಆಂತರಿಕ ಕಲಹದ ವಿಷಯವನ್ನು ದಿಕ್ಕು ತಪ್ಪಿಸಲು ಆರ್.ಎಸ್.ಎಸ್. ಹೆಸರನ್ನು ಬಳಸಿ ವಿಷಯಾಂತರ ಮಾಡಲು ಹೊರಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಆರ್.ಎಸ್.ಎಸ್. ಶಿಸ್ತು, ಸಂಯಮ, ಶಾಂತಿಯ ಎಲ್ಲೆಯನ್ನೂ ಎಂದೂ ಮೀರಿದ ಉದಾಹರಣೆಗಳಿಲ್ಲ ಎಂದು ಹೇಳಿದ್ದಾರೆ. ಪರಿಷತ್ ಸದಸ್ಯ ಸಿ.ಟಿ.ರವಿ ಯಾವ ಕಾರಣಕ್ಕೆ ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ನಿಷೇಧಿಸಬೇಕು ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಶ್ನಿಸಿದ್ದಾರೆ. ರಾಷ್ಟ್ರಪ್ರೇಮ ತೋರುವುದು ಸಂವಿಧಾನ ಬಾಹಿರವೇ ಎಂದು ಕೇಳಿದ್ದಾರೆ.

<><><><>

ಕಾಂಗೆಸ್ ಪಕ್ಷದಲ್ಲಿನ ಗೊಂದಲದಿಂದ ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಿದೆ' ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಸಂಪುಟದಲ್ಲಿ ಸ್ಥಾನ ಪಡೆಯಲು ಹಾಗೂ ಇದ್ದ ಸ್ಥಾನ ಉಳಿಸಿಕೊಳ್ಳಲು ಕಾಂಗ್ರೆಸ್ ಶಾಸಕರು ಮತ್ತು ಸಚಿವರು ಕಿತ್ತಾಡುತ್ತಿದ್ದಾರೆ ಎಂದು ದೂರಿದ್ದಾರೆ. ಪೊಲೀಸ್ ಇಲಾಖೆಯಲ್ಲಿ ಭ್ರಷ್ಟಾಚಾರ ಮಿತಿಮೀರಿದ್ದು, ಕಾನೂನು ಸುವ್ಯವಸ್ಥೆ ಸಂಪೂರ್ಣ ಹಳಿತಪ್ಪಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಧ್ವನಿ : ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

ಇದೇ ವೇಳೆ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಕರಿ ಟೋಪಿ ಎಂದು ಆರ್‌ಎಸ್‌ಎಸ್ ಬಗ್ಗೆ ಮಾತನಾಡಿದ್ದು ಖಂಡನೀಯ' ಎಂದು ಪ್ರತಿಕ್ರಿಯಿಸಿದ್ದಾರೆ.

<><><><>

ಜಗತ್ತಿನ ಅತ್ಯಂತ ದೊಡ್ಡ ಸ್ವಯಂಸೇವಕರ ಪಡೆ ಹೊಂದಿರುವ ಆರ್.ಎಸ್.ಎಸ್. ನಿಷೇಧಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಕರೆ ನೀಡಿರುವುದು ಬೌದ್ಧಿಕ ದಾರಿದ್ರ್ಯತನ ತೋರಿಸುತ್ತದೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪ್ರಕೃತಿ ವಿಕೋಪ, ರೈಲು ದುರಂತ, ಕೋವಿಡ್, ಅಪಘಾತಗಳು, ಭೂಕಂಪ, ನೆರೆಯಾದಾಗ ನೊಂದವರಿಗೆ ಮೊದಲು ಆಸರೆಯಾಗುವುದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸ್ವಯಂ ಸೇವಕರು. ಸೇವಾತತ್ಪರತೆ, ಸಮಾಜ ಸೇವೆ, ರಾಷ್ಟ್ರ ಪ್ರೇಮದ ಬಗ್ಗೆ ಜಾಗೃತಿ, ಶಿಸ್ತಿಗೆ ಮತ್ತೊಂದು ಹೆಸರೇ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಎಂದು ಹೇಳಿದ್ದಾರೆ. ಕೂಡಲೇ ಎಸ್.ಡಿ.ಪಿ.ಐ ನಂತಹ ದೇಶ ವಿರೋಧಿ ಸಂಘಟನೆಗಳನ್ನು ನಿಷೇಧ ಮಾಡುವಂತೆ ಆಗ್ರಹಿಸಿದ್ದಾರೆ. ಅತ್ಯಂತ ಹಿಂದುಳಿದ ಜಿಲ್ಲೆ ಎಂದು ಕರೆಸಿಕೊಳ್ಳುವ ಹಾಗೂ ಅವರೇ ಪ್ರತಿನಿಧಿಸುವ ಕಲ್ಬುರ್ಗಿಯನ್ನು ಮಾದರಿ ಜಿಲ್ಲೆಯನ್ನಾಗಿ ಮಾಡಲಿ ಎಂದು ಪ್ರಿಯಾಂಕ್ ಖರ್ಗೆಗೆ ತಿರುಗೇಟು ನೀಡಿದ್ದಾರೆ.

<><><><>

ಬೆಂಗಳೂರಿನ ಮತ್ತಿಕೆರೆಯಲ್ಲಿರುವ ಜಯಪ್ರಕಾಶ್ ನಾರಾಯಣ್ ಉದ್ಯಾನವನಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಭೇಟಿ ನೀಡಿ, ವಾಯುವಿಹಾರ ಮಾಡುತ್ತಿದ್ದ ನಾಗರಿಕರೊಂದಿಗೆ ಸಂವಾದ ನಡೆಸಿ, ಜನರ ಅಹವಾಲುಗಳನ್ನು ಆಲಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ಯೋಜನಾಬದ್ಧ ನಗರವಲ್ಲ. ಅದನ್ನು ಸಂಪೂರ್ಣ ಅಭಿವೃದ್ಧಿಗೊಳಿಸಲು ಪ್ರತಿಯೊಬ್ಬ ನಾಗರಿಕರ ಸಹಕಾರ ಅಗತ್ಯ ಎಂದು ತಿಳಿಸಿದ್ದಾರೆ. ರಾಜಕಾರಣದ ಹೊರತಾಗಿ ಬೆಂಗಳೂರನ್ನು ಅಭಿವೃದ್ಧಿ ಪಡಿಸುವ ಜವಾಬ್ದಾರಿ ಎಲ್ಲರ ಮೇಲೂ ಇದೆ. ಹಾಗಾಗಿ ತಾವು ನಾಗರಿಕರೊಂದಿಗೆ ನೇರವಾಗಿ ಮಾತುಕತೆ ನಡೆಸಿ, ಅವರ ಸಮಸ್ಯೆಗಳೇನು ಎಂಬುದನ್ನು ಅರಿತುಕೊಳ್ಳುವ ಸಲುವಾಗಿ ಪ್ರತಿದಿನ ಉದ್ಯಾನವನಗಳಿಗೆ ಭೇಟಿ ನೀಡುತ್ತಿರುವುದಾಗಿ ಹೇಳಿದ್ದಾರೆ. ಬೆಂಗಳೂರನ್ನು ಸಂಪೂರ್ಣ ಅಭಿವೃದ್ಧಿ ಮಾಡುವ ದೃಷ್ಟಿಯಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆ ಮಾಡಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><><><>

ಹಾಸನದಲ್ಲಿ ನಡೆಯುತ್ತಿರುವ  ಹಾಸನಾಂಬ ಹಾಗೂ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವಕ್ಕೆ ಭಾನುವಾರವಾದ ಇಂದು ರಜೆಯ ಹಿನ್ನೆಲೆಯಲ್ಲಿ  ಭಾರಿ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವರ ದರ್ಶನ ಪಡೆದಿದ್ದಾರೆ. ಬೆಳಗ್ಗೆಯಿಂದಲೇ ಸರತಿ ಸಾಲಿನಲ್ಲಿ ನಿಂತು ಭಕ್ತರು ದೇವರ ದರ್ಶನ ಪಡೆದರು. ದರ್ಶನಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿದ್ದು ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಖುದ್ದು ದೇವಾಲಯದಲ್ಲೇ ಹಾಜರಿದ್ದು ಭಕ್ತರ ಸಮಸ್ಯೆಗಳನ್ನು ಆಲಿಸಿದರು. ಕೇವಲ ಎರಡೇ ದಿನಗಳಲ್ಲಿ ದೇವಾಲಯ ೨ ಕೋಟಿ ೨೪ ಲಕ್ಷ ರೂಪಾಯಿ . ಆದಾಯ ದಾಖಲಿಸಿದೆ. ಭಾನುವಾರ ಬೆಳಿಗ್ಗೆ ೮ ಗಂಟೆಯವರೆಗೆ ೩೦೦ ವಿಶೇಷ ದರ್ಶನದಲ್ಲಿ ಒಟ್ಟು ೨೭ ಸಾವಿರದ ೭೫೯ ಟಿಕೆಟ್‌ಗಳು ಮಾರಾಟವಾಗಿವೆ. ಅದೇ ರೀತಿ ೧ ಸಾವಿರ ವಿಶೇಷ ದರ್ಶನದಲ್ಲಿ ಒಟ್ಟು ೧೨ ಸಾವಿರದ ೩೯೭ ಮಾರಾಟವಾಗಿವೆ.

<><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರತಿ ವರ್ಷ ದೀಪಾವಳಿ ಹಬ್ಬದಲ್ಲಿ ಆಚರಿಸಲಾಗುವ ಬಿಂಡಿಗ ಗ್ರಾಮದ ದೇವಿರಮ್ಮ ದೀಪೋತ್ಸವ ಕಾರ್ಯಕ್ರಮವು ಇದೇ ೧೯ ರಿಂದ ೨೩ ರವರೆಗೆ ನಡೆಯಲಿದೆ ಎಂದು ದೇವಾಲಯದ ಆಡಳಿತ ಮಂಡಳಿ ತಿಳಿಸಿದೆ. ದೀಪಾವಳಿ ಸಂದರ್ಭದಲ್ಲಿ ಬಿಂಡಿಗಾ ಗ್ರಾಮದಲ್ಲಿರುವ ದೇವಿರಮ್ಮ ದೇವಾಲಯದಲ್ಲಿ ವಿಶೇಷ ಪೂಜೆ ಹಾಗೂ ಕಾರ್ಯಕ್ರಮ ಏರ್ಪಡಿಸಲಾಗಿದೆ. ದೇವಿರಮ್ಮ ಬೆಟ್ಟದ ಮೇಲಿರುವ ಗುಡಿಯಲ್ಲಿ ಪೂಜೆ ಹಾಗು ದೇವಿಯ ದರ್ಶನ ನಡೆಯಲಿದೆ. ಈ ವರ್ಷ ರಾತ್ರಿ ಬೆಟ್ಟ ಹತ್ತುವುದನ್ನು  ನಿಷೇಧಿಸಲಾಗಿದೆ. ಇದೇ ೧೯ ಹಾಗು ೨೦ ಎರಡು ದಿನಗಳ ಕಾಲ ಹಗಲು ಮಾತ್ರ ಬೆಟ್ಟಹತ್ತಲು ಭಕ್ತರಿಗೆ ಅವಕಾಶ ಕಲ್ಪಿಸಲಾಗಿದೆ. ಈ ಎರಡೂ ದಿನ ಕೂಡ ಬೆಟ್ಟದ ಮೇಲೆ ದೇವರ ದರ್ಶನಕ್ಕೆ ಅವಕಾಶವಿರಲಿದೆ.

<><><>

ಬೆಂಗಳೂರಿನ ಇಬ್ಲೂರು ಜಂಕ್ಷನ್‌ನಲ್ಲಿ ವಾಕಲೂರು ಯೋಜನೆಯ ಭಾಗವಾಗಿ ಪಾದಚಾರಿ ಮಾರ್ಗಗಳ ಸುಧಾರಣಾ ಕಾರ್ಯಗಳ ಪ್ರಗತಿಯನ್ನು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಇಂದು ಪರಿಶೀಲಿಸಿದರು. ಇಬ್ಲೂರು ಜಂಕ್ಷನ್ ಮೇಲ್ಸೇತುವೆ ಸೌಂದರೀಕರಣ ಕಾರ್ಯದಲ್ಲಿ ೧೦೦ಕ್ಕೂ ಹೆಚ್ಚು ಸ್ವಯಂಸೇವಕರು ಪಾಲ್ಗೊಂಡಿದ್ದು, ಅವರಲ್ಲಿ ೧೩ ವರ್ಷದ ಮೂವರು ಮಕ್ಕಳು ಸ್ವಯಂಪ್ರೇರಿತರಾಗಿ ಭಾಗವಹಿಸಿದ್ದರು. ಮುಖ್ಯ ಆಯುಕ್ತರು ಈ ಮಕ್ಕಳ ಉತ್ಸಾಹಕ್ಕೆ ಪ್ರಶಂಸೆ ವ್ಯಕ್ತಪಡಿಸಿದರು. ಪಾದಚಾರಿ ಮಾರ್ಗದಲ್ಲಿನ ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಳಾಂತರಿಸಲು ಹಾಗೂ

ರಸ್ತೆಯಲ್ಲಿ ಹೈ-ರೈಸ್ ಜೀಬ್ರಾ ಕ್ರಾಸಿಂಗ್ ಅಳವಡಿಸಲು ಸೂಚನೆ ನೀಡಿದರು. ಇಬ್ಲೂರು ಜಂಕ್ಷನ್‌ನ ಖಾಲಿ ಜಾಗದಲ್ಲಿ ರಾಜಕಾಲುವೆ ನಿರ್ಮಿಸಿ, ಪ್ರದೇಶ ಜಲಾವೃತವಾಗದಂತೆ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಿದರು. ಸುರಕ್ಷಾ ೭೫ ಯೋಜನೆಯಡಿ ೭೫ ಜಂಕ್ಷನ್‌ಗಳ ಅಭಿವೃದ್ಧಿ ಕಾರ್ಯ ಪ್ರಗತಿಯಲ್ಲಿದ್ದು, ಇನ್ನಿತರೆ ಜಂಕ್ಷನ್‌ಗಳನ್ನು ಸಿಎಸ್‌ಆರ್ ಅನುದಾನದಡಿ ಅಭಿವೃದ್ಧಿಪಡಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

<><><>

ಕನ್ನಡ ನಾಡಿನ ಭಾಷೆ, ನೆಲ, ಜಲ ಸೇರಿದಂತೆ ಕನ್ನಡತ್ವದ ಸಾಂಸ್ಕೃತಿಕ ಹಿತಾಸಕ್ತಿ ಕಾಪಾಡಲು ಕರ್ನಾಟಕ ರಕ್ಷಣಾ ವೇದಿಕೆ ತನ್ನ ಕಾರ್ಯಕರ್ತರಿಗೆ ರಾಜ್ಯಮಟ್ಟದ ದೀಕ್ಷಾ ಬೃಹತ್ ಅಭಿಯಾನ ಆಯೋಜಿಸಿದೆ, ಗಡಿ ಜಿಲ್ಲೆ ಬೆಳಗಾವಿಯಲ್ಲಿ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ನಾರಾಯಣಗೌಡ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಸುದ್ಧಿಗಾರರೊಂದಿಗೆ ಮಾತನಾಡಿದ ನಾರಾಯಣಗೌಡ, ನಾಡಿಗೆ ಎದುರಾಗುವ ಯಾವುದೇ ಸಮಸ್ಯೆ, ಸಂದರ್ಭ, ತೊಂದರೆಗಳು ಎದುರಾದರೆ ರಕ್ಷಣಾ ವೇದಿಕೆ ಹೋರಾಟ ನಡೆಸಲು ಸದಾ ಸಿದ್ಧವಿದೆ. ಬೆಳಗಾವಿಯಿಂದ ಆರಂಭವಾದ ಈ ದೀಕ್ಷಾ ಕಾರ್ಯಕ್ರಮ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಸಂಚರಿಸುವ ಮೂಲಕ ಕಾರ್ಯಕರ್ತರಿಗೆ ದೀಕ್ಷೆ ನೀಡಲಿದೆ ಎಂದು ತಿಳಿಸಿದ್ದಾರೆ.

<><><>

ಸಹಕಾರ ಸಂಘಗಳು ಕಾಲಕ್ಕೆ ಅನುಗುಣವಾಗಿ ಆಧುನಿಕ ತಾಂತ್ರಿಕತೆಗಳನ್ನು ಅಳವಡಿಸಿಕೊಂಡಾಗ ಆಡಳಿತದಲ್ಲಿ ಪಾರದರ್ಶಕತೆ ಕಾಪಾಡಲು ಸಾಧ್ಯ ಎಂದು ದಾವಣಗೆರೆ ಜಿಲ್ಲಾ ಸಹಕಾರ ಸಂಘದ ಅಧ್ಯಕ್ಷ ಸಿರಿಗೆರೆ ರಾಜಣ್ಣ ತಿಳಿಸಿದ್ದಾರೆ. ರಾಜ್ಯಮಟ್ಟದ ವಿಶೇಷ ಕಾರ್ಯದಕ್ಷತೆ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು ಹಣಕಾಸಿನ ಮೇಲಿನ ಅತಿಯಾದ ಅವಲಂಬನೆಯಿಂದ ಸಹಕಾರ ಸಂಘಗಳು ಹೊರಬರಬೇಕು ಎಂದು ಹೇಳಿದ್ದಾರೆ. ರಾಜಕೀಯ ಹಸ್ತಕ್ಷೇಪದಿಂದ ಮುಕ್ತಗೊಂಡಾಗ ಮಾತ್ರ ದೇಶ ಪ್ರಬಲ ಆರ್ಥಿಕ ಶಕ್ತಿಯಾಗಿ ಬೆಳೆಯಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><>

ಖ್ಯಾತ ಸಾಹಿತಿ, ಕಡಲ ತಡಿಯ ಭಾರ್ಗವ ಕೋಟ ಶಿವರಾಮ ಕಾರಂತರ ಹುಟ್ಟು ಹಬ್ಬದ ಅಂಗವಾಗಿ ಕಲ್ಕೂರ ಪ್ರತಿಷ್ಠಾನದಿಂದ ನೀಡಲಾಗುವ ೨೦೨೫ನೆಯ ಸಾಲಿನ 'ಕಾರಂತ ಪ್ರಶಸ್ತಿ'

ಯನ್ನು ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ನೀಡಲಾಗುವುದು ಎಂದು ಕಲ್ಕೂರ ಪ್ರತಿಷ್ಠಾನದ ಅಧ್ಯಕ್ಷ ಎಸ್.ಪ್ರದೀಪ್ ಕುಮಾರ್ ಕಲ್ಕೂರ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ೧೪ ಮಂಗಳೂರಿನ ಶಾರದಾ ವಿದ್ಯಾಲಯದ ಸಭಾಂಗಣದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಹಂಪಿ ವಿಶ್ವವಿದ್ಯಾನಿಲಯದ ವಿಶ್ರಾಂತ ಉಪಕುಲಪತಿ ಪ್ರೊ. ಬಿ.ಎ. ವಿವೇಕ ರೈ, ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಪಿ.ಎಲ್. ಧರ್ಮ, ಶಾಸಕ ಡಿ.ವೇದವ್ಯಾಸ ಕಾಮತ್ ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚರ ಮುಗಿಯಿತು <><>